ಶಾಸನ ರಚನೆ

ಈ) ಭಾರತ ದಂಡ ಸಂಹಿತೆ ಮತ್ತು ದಂಡ ಪ್ರಕ್ರಿಯಾ ಸಂಹಿತೆ ಕರ್ನಾಟಕ (ತಿದ್ದುಪಡಿ) ವಿಧೇಯಕ, 2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್. ಸುರೇಶ್ ಕುಮಾರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಗೃಹ ಸಚಿವರ ಪರವಾಗಿ):- ಮಾನ್ಯ ಅಧ್ಯಕ್ಷರೆ, 2009ನೇ ಸಾಲಿನ ಭಾರತ ದಂಡ ಸಂಹಿತೆ ಮತ್ತು ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

"2009ರ ಭಾರತ ದಂಡ ಸಂಹಿತೆ ಮತ್ತು ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ"ವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್. ಸುರೇಶ್‌ಕುಮಾರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು (ಮಾನ್ಯ ಗೃಹ ಸಚಿವರ ಪರವಾಗಿ) :- ಮಾನ್ಯ ಅಧ್ಯಕ್ಷರೆ 2009ರ ಭಾರತ ದಂಡ ಸಂಹಿತೆ ಮತ್ತು ದಂಡ ಪ್ರಕ್ರಿಯಾ ಸಂಹಿತೆ(ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ವಿರೋಧ ಪಕ್ಷದ ನಾಯಕರು):- ಸರ್ಕಾರದವರು ಎಷ್ಟು ಅಟೆಂಟೀವ್ ಆಗಿದ್ದಾರೆಂದು ನಾನು ತಮ್ಮ ಗಮನಕ್ಕೆ ತರುತ್ತಿದ್ದೇನೆ.

ಶ್ರೀ ಎಸ್. ಸುರೇಶ್ ಕುಮಾರ್:- ಮಾನ್ಯ ವಿರೋಧ ಪಕ್ಷದ ನಾಯಕರೇ ನಾನೇ ಹೌದು ಎಂದು ಹೇಳಿದ್ದೇನೆ.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ:- ನೀವು ಒಬ್ಬರು ಹೇಳಿದರೆ ನಿಮ್ಮ ಹಿಂದೆ ಯಾರೂ ಇಲ್ಲ.